# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1110** |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21.08.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಕಾರಾಗೃಹವನ್ನು ಬಂಟ್ವಾಳ ತಾಲ್ಲೂಕಿನ ಬಾಳೆಪುಣೆಯಲ್ಲಿ ಸ್ಥಾಪಿಸಲು ಉದ್ದೇಶಿಸಿ ಕಟ್ಟಡ ನಿರ್ಮಾಣಗೊಂಡು 03 ವರ್ಷ ಕಳೆದರೂ ಈ ಕಟ್ಟಡ ಮೂಲಭೂತ ಸೌಕರ್ಯದ ಕೊರತೆಯಿಂದ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ➢ ಮಂಗಳೂರಿನ ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮದಲ್ಲಿ ನೂತನ ಕೇಂದ್ರ ಕಾರಾಗೃಹ ನಿರ್ಮಾಣಕ್ಕೆ ಜಿಲ್ಲಾಡಳಿತವು 63 ಎಕರೆ 89 ಸೆಂಟ್ಸ್ ಜಮೀನನ್ನು ಮಂಜೂರು ಮಾಡಿರುತ್ತದೆ. |
| ಆ) | ಬಾಳೆಪುಣೆಯಲ್ಲಿ ಒಂದು ಸಾವಿರ ಅಧಿಕ ಮಂದಿ ಸಾಮರ್ಥ್ಯದ ಖೈದಿ ಒದಗಿಸುವ ಯೋಜನೆ ಇದಾಗಿದ್ದು, ಪ್ರಸ್ತುತ ಇರುವ ಜೈಲಿನಲ್ಲಿ ಖೈದಿಗಳು ದಿನಂಪ್ರತಿ ಖೈದಿಗಳ ಮಧ್ಯೆ ಹೊಡೆದಾಟ ನಡೆಯುತ್ತಿದ್ದು, ನಿಗದಿತ ಖೈದಿಗಳ ಸಂಖ್ಯೆಗಿಂತ ಹೆಚ್ಚಿನ ಖೈದಿಗಳು ಇದ್ದು, ಬಾಳೆಪುಣೆ ಜೈಲು ನಿರ್ಮಾಣ ಪಾಳು ಬಿದ್ದಿರುವುದು ಸರ್ಕಾರದ ಗಮನದಲ್ಲಿದೆಯೇ; (ವಿವರ ನೀಡುವುದು) | ➢ ಮಂಗಳೂರಿನ ಬಂಟ್ವಾಳ ತಾಲ್ಲೂಕು ಚೇಳೂರು ಮತ್ತು ಕುರ್ನಾಡು ಗ್ರಾಮದಲ್ಲಿ 1009 ಬಂದಿಗಳ ಸಾಮರ್ಥ್ಯದ ನೂತನ ಕೇಂದ್ರ ಕಾರಾಗೃಹ ನಿರ್ಮಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 214 ಪಿಆರ್‌ಎ 2018 ದಿನಾಂಕ:01-03-2019 ರನ್ವಯ, ರೂ.110.00 ಕೋಟಿ ಅನುದಾನಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡಿ, ಸದರಿ ರೂ.110.00 ಕೋಟಿಗಳ ಪೂರ್ಣ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗರವರಿಂದ ಮೊದಲನೇ ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. |
| ಇ) | ಪ್ರಸ್ತುತ ನಿರ್ಮಿಸಲು ಉದ್ದೇಶಿಸಿರುವ ಕಾರಾಗೃಹ ಸಂಪೂರ್ಣಗೊಳಿಸಲು ಬೇಕಾಗುವ ಹಣವೆಷ್ಟು: ಬಿಡುಗಡೆ ಮಾಡಲು ಇಲಾಖೆ ಕೈಗೊಂಡ ಕ್ರಮಗಳಾವುವು; (ವಿವರ ನೀಡುವುದು) | ➢ ಪ್ರಸ್ತುತ, ಮಂಗಳೂರು ನೂತನ ಕೇಂದ್ರ ಕಾರಾಗೃಹದ ಮೊದಲನೇ ಹಂತದ ಕಾಮಗಾರಿಗಳು ಪೂರ್ಣಗೊಂಡಿದ್ದು, 2ನೇ ಹಂತದ ಕಾಮಗಾರಿಗೆ ರೂ.179.00 ಕೋಟಿಗಳ ಅಂದಾಜು ಪಟ್ಟಿ ಸ್ವೀಕೃತವಾಗಿದ್ದು, ಅನುದಾನ ಬಿಡುಗಡೆ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ. |
| ಈ) | ಪ್ರಸ್ತುತ ನಿರ್ಮಿಸಲು ಉದ್ದೇಶಿಸಿರುವ ಜೈಲಿನ ಆವರಣ ಗೋಡೆ ಮತ್ತು ರಸ್ತೆಯನ್ನು ನಿರ್ಮಿಸದೇ ಕಟ್ಟಡ ನಿರ್ಮಿಸಿ, ಲೋಪ ಎಸಗಿರುವ ಇಲಾಖೆ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದೇ ಇರಲು ಕಾರಣವೇನು; (ವಿವರ ನೀಡುವುದು) | ➢ ಸದರಿ ಯೋಜನೆಯಲ್ಲಿ ಎರಡು ಹಂತದ ಕಾಮಗಾರಿಗಳಿರುವುದರಿಂದ, ಕೆಲವೊಂದು ಕಾಮಗಾರಿಗಳು ಮೊದಲನೇ ಹಂತದಲ್ಲಿ ಕೈಗೊಳ್ಳಲಾಗಿದ್ದು, ಉಳಿದ ಕಾಮಗಾರಿಗಳನ್ನು ಎರಡನೇ ಹಂತದಲ್ಲಿ ಕೈಗೊಳ್ಳಬೇಕಾಗಿರುತ್ತದೆ. |

| | | |
|---|---|---|
| ಉ) | ಪ್ರಸ್ತುತ ನಗರದ ಜೈಲಿನಲ್ಲಿ ನಿರಂತರವಾಗಿ ಹೊಡೆದಾಟ ಕ್ರಿಮಿನಲ್ ಅಪರಾಧ ಕೆಲಸಗಳು ನಡೆಯುತ್ತಿದ್ದರೂ ಇದನ್ನು ಹತೋಟಿಗೆ ತರಲು ಕೈಗೊಂಡ ಕ್ರಮವೇನು? (ವಿವರ ನೀಡುವುದು) | ➢ ಬಂದಿಗಳ ನಡುವಿನ ಗುಂಪು ಘರ್ಷಣೆಯನ್ನು ತಪ್ಪಿಸಲು ಬಂದಿಯ ಹಿನ್ನೆಲೆಯನ್ನು ತಿಳಿದು ಸೂಕ್ತ ರೀತಿಯಲ್ಲಿ ನಿಗಾವಹಿಸಿ ಬಂದಿಗಳ ನಡುವೆ ಘರ್ಷಣೆಯಾಗದಂತೆ ಕ್ರಮವಹಿಸಲಾಗುತ್ತಿದೆ.<br><br>➢ ಪೊಲೀಸ್ ಇಲಾಖೆ ಮತ್ತು ಕಾರಾಗೃಹ ಇಲಾಖೆಯ ಸಹಯೋಗದಲ್ಲಿ ಕಾರಾಗೃಹದ ಬಂದಿಗಳನ್ನು ಹಾಗೂ ಬಂದಿಗಳ ಕೊಠಡಿಗಳನ್ನು ಅನಿರೀಕ್ಷಿತವಾಗಿ ತಪಾಸಣೆ ಕೈಗೊಳ್ಳಲಾಗುತ್ತಿದೆ.<br><br>➢ ಮಂಗಳೂರು ಜಿಲ್ಲಾ ಕಾರಾಗೃಹದಲ್ಲಿ 65 ವಾರ್ಡರ್ ವೃಂದದ ಮಂಜೂರಾತಿ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಆಡಳಿತ ಮತ್ತು ಭದ್ರತೆ ದೃಷ್ಟಿಯಿಂದ 2025-26ನೇ ಸಾಲಿನ ಸಾರ್ವತ್ರಿಕ ವರ್ಗಾವಣೆಯಲ್ಲಿ ವಿವಿಧ ಕಾರಾಗೃಹಗಳಿಂದ 24 ಸಂಖ್ಯೆ ಹುದ್ದೆಗಳನ್ನು ವರ್ಗಾಯಿಸಲಾಗಿದ್ದು, ಭದ್ರತೆಗೆ ಕ್ರಮವಹಿಸಲಾಗಿರುತ್ತದೆ.<br><br>➢ ಪ್ರಸ್ತುತ ಮಂಗಳೂರು ಜಿಲ್ಲಾ ಕಾರಾಗೃಹದ ಪರಿಸ್ಥಿತಿ ಹತೋಟಿಯಲ್ಲಿದ್ದು, ಕಾರಾಗೃಹಗಳ ಉಪಮಹಾನಿರೀಕ್ಷಕರು, ದಕ್ಷಿಣ ವಲಯ ಬೆಂಗಳೂರು ರವರು ಆಗಿಂದ್ದಾಗ್ಗೆ ಸದರಿ ಕಾರಾಗೃಹಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿರುತ್ತಾರೆ.<br><br>➢ ಮುಖ್ಯ ಅಧೀಕ್ಷಕರು ಕೇಂದ್ರ ಕಾರಾಗೃಹ ಶಿವಮೊಗ್ಗ ರವರನ್ನು ಮಂಗಳೂರು ಜಿಲ್ಲಾ ಕಾರಾಗೃಹದ ಮೇಲುಸ್ತುವಾರಿ ಮತ್ತು ಕಾಲ ಕಾಲಕ್ಕೆ ಭೇಟಿ ನೀಡಿ ಭದ್ರತೆ ಪರಿಶೀಲಿಸಲು ಸೂಚಿಸಲಾಗಿರುತ್ತದೆ.<br><br>➢ ಕಾರಾಗೃಹಗಳಲ್ಲಿ ಹೊಡೆದಾಟದ ಪ್ರಕರಣಗಳನ್ನು ತಡೆಗಟ್ಟಲು ವಿಫಲರಾಗುವ ಸಂಬಂಧಿಸಿದ ಕಾರಾಗೃಹದ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ 1957 ರ ಕೆ.ಸಿ.ಎಸ್ (ಸಿ ಸಿ ಮತ್ತು ಎ) ನಿಯಮಾವಳಿಯನ್ವಯ ಕಠಿಣ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದ್ದು, ವಿವರವಾದ ಇಲಾಖಾ ವಿಚಾರಣೆ ನಡೆಸಲು ನಿವೃತ್ತ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 232 ಪಿಆರ್‌ಎ 2025

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು